# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಸೋಮವಾರ, ದಿನಾಂಕ:17ನೇ ಜುಲೈ, 2023

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

## 01. ವರದಿಯನ್ನೊಪ್ಪಿಸುವುದು

ಶ್ರೀ ಎಸ್. ರವಿ (ಸದಸ್ಯರು, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ) ಅವರು ಹದಿನೈದನೇ ವಿಧಾನಸಭೆಯ 2020-21ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂಬಂಧಪಟ್ಟ ಹನ್ನೆರಡನೇ ವಿಶೇಷ ವರದಿಯನ್ನೊಪ್ಪಿಸುವುದು.

## 02. ಗಮನ ಸೆಳೆಯುವ ಸೂಚನೆಗಳು

01 **ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ** ಅವರು ಬೆಳಗಾವಿ ಜಿಲ್ಲೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಅಧೀನದಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಬಿ.ಆರ್. ಅಂಬೇಡ್ಕರ್ ಹಾಗೂ ಇತರೆ ಸರ್ಕಾರಿ ವಸತಿ ಶಿಕ್ಷಣ ಶಾಲೆಗಳಲ್ಲಿ ಪ್ರೌಢ ಶಿಕ್ಷಣ ವ್ಯಾಸಂಗ ಮುಗಿಸಿದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಪದವಿ ಪೂರ್ವ ಶಿಕ್ಷಣ ಪೂರೈಸಲು ಅನುವಾಗುವಂತೆ ಸದರಿ ವಸತಿ ಶಾಲೆಗಳನ್ನು ಉನ್ನತೀಕರಿಸುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

02 **ಶ್ರೀಮತಿ ಹೇಮಲತಾ ನಾಯಕ್** ಅವರು ರಾಜ್ಯದಲ್ಲಿ ಮುಂಗಾರು ಬೆಳೆಗೆ ನಿಗದಿತ ಮಳೆ ಪ್ರಮಾಣ ಆಗದಿರುವುದರಿಂದ ಮಳೆ ಆಶ್ರಿತ ಬಿತ್ತನೆ ಪ್ರಮಾಣ ಕಡಿಮೆ ಆಗಿರುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

03 **ಶ್ರೀ ಯು.ಬಿ. ವೆಂಕಟೇಶ್** ಅವರು ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್‌ನಲ್ಲಿ ನಡೆದಿರುವ ಅವ್ಯವಹಾರಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಈವರೆವಿಗೂ ಕ್ರಮ ಕೈಗೊಳ್ಳದಿರುವ ಹಾಗೂ ಈ ಪ್ರಕರಣವನ್ನು ಸಿ.ಬಿ.ಐ. ತನಿಖೆಗೆ ವಹಿಸದಿರುವ ಕುರಿತು ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

04 **ಶ್ರೀ ಶರವಣ ಟಿ.ಎ** ಅವರು ರಾಜ್ಯಾದ್ಯಂತ ಹಾಗೂ ಬೆಂಗಳೂರಿನಲ್ಲಿ ಇತ್ತೀಚೆಗೆ ಪೊಲೀಸ್ ಅಧಿಕಾರಿಗಳು ರಿಕವರಿ ನೆಪದಲ್ಲಿ ಗಿರವಿ ಮತ್ತು ಚಿನ್ನದ ಅಂಗಡಿ ಮಾಲೀಕರಿಗೆ ಕಿರುಕುಳ ನೀಡುತ್ತಿರುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

2..

05 **ಡಾ: ವೈ.ಎ. ನಾರಾಯಣಸ್ವಾಮಿ** ಅವರು ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಂದ ಪದೋನ್ನತಿ ಪಡೆದು ಶಿಕ್ಷಕರು/ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ 10, 15 ಹಾಗೂ 20 ವರ್ಷಗಳ ಕಾಲಮಿತಿ ವೇತನ ಬಡ್ತಿ ನೀಡದಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆಯುವುದು.

06 **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆ ಲೋಕೋಪಯೋಗಿ ಇಲಾಖೆಯಲ್ಲಿ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ರಾಜ್ಯ ಹೆದ್ದಾರಿ ರಸ್ತೆ, ಸೇತುವೆಗಳು, ನ್ಯಾಯಾಧೀಶರ ಕಟ್ಟಡಗಳು ಹಾಗೂ ನಿರ್ವಹಣೆ ಮತ್ತು ದುರಸ್ಥಿ ಕಾಮಗಾರಿಗಳನ್ನು ಗುತ್ತಿಗೆದಾರರು ಪೂರ್ಣಗೊಳಿಸಿದ್ದರೂ ಇದುವರೆಗೂ ಬಾಕಿ ಹಣ ಬಿಡುಗಡೆಯಾಗದಿರುವ ಕುರಿತು ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

07 **ಶ್ರೀ ಎಸ್.ವ್ಹಿ. ಸಂಕನೂರ** ಅವರು ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಸಿಬ್ಬಂದಿಗಳಿಗೆ ಕಳೆದ 3-4 ವರ್ಷಗಳಿಂದ ವೇತನ ಹಾಗೂ ನಿವೃತ್ತಿ ವೇತನಕ್ಕೆ ಬೇಕಾದ ಅನುದಾನ ಬಿಡುಗಡೆ ಆಗದಿರುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 03. ನಿಯಮ 330ರ ಮೇರೆಗೆ

01 **ಶ್ರೀ ಮರಿತಿಬ್ಬೇಗೌಡ** ಅವರು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 2011ನೇ ಸಾಲಿನಲ್ಲಿ ನೇಮಕವಾಗಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ ಪದೋನ್ನತಿಯನ್ನು ನೀಡದಿರುವ ಕುರಿತು ಪ್ರಸ್ತಾಪಿಸುವುದು.

02 **ಡಾ: ತೇಜಸ್ವಿನಿಗೌಡ** ಅವರು ಬೆಂಗಳೂರಿನ 'ಸೆಂಚುರಿ ಕ್ಲಬ್'ನ್ನು Park Zone (ಉದ್ಯಾನ ವಲಯ) ನಿಂದ ಕೈಬಿಡುವ ಕುರಿತು ಪ್ರಸ್ತಾಪಿಸುವುದು.

03 **ಶ್ರೀ ಎಸ್. ರವಿ** ಅವರು ಬೆಂಗಳೂರು ಮಹಾನಗರದಿಂದ ಹೊರ ಬಿಡುವಂತಹ ಕಲುಷಿತ ಮತ್ತು ಕೊಳಚೆ ನೀರನ್ನು ಶುದ್ಧೀಕರಿಸದೆ ಬಿಡುತ್ತಿರುವುದರಿಂದ ರಾಮನಗರ ಜಿಲ್ಲೆಯಲ್ಲಿ ಹರಿಯುತ್ತಿರುವ ಅರ್ಕಾವತಿ ಮತ್ತು ವೃಷಭಾವತಿ ನದಿಗಳ ನೀರು ಮಲೀನಗೊಂಡು ಜನ-ಜೀವನ, ಜಲಚರ ಮತ್ತು ಪ್ರಾಣಿ-ಪಕ್ಷಿಗಳ ಮೇಲೆ ದುಷ್ಪರಿಣಾಮ ಬೀರುತ್ತಿರುವ ಕುರಿತು ಪ್ರಸ್ತಾಪಿಸುವುದು.

04 **ಶ್ರೀಯುತರುಗಳಾದ ತಿಪ್ಪಣ್ಣಪ್ಪ, ಶಶೀಲ್ ಜಿ. ನಮೋಶಿ, ಎನ್. ರವಿಕುಮಾರ್, ಡಾ: ತಳವಾರ್ ಸಾಬಣ್ಣ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ** ಅವರುಗಳು ಕಲ್ಬುರ್ಗಿ ಜಿಲ್ಲೆಯ ಜೇವರ್ಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದಲ್ಲಿ ರೈತರೊಬ್ಬರು ಟ್ರ್ಯಾಕ್ಟರ್ ಮೂಲಕ ಅಕ್ರಮವಾಗಿ ಮರಳು ಸಾಗಿಸುತ್ತಿದ್ದಾಗ ತಡೆಯಲು ಆ ಸಂದರ್ಭದಲ್ಲಿ ಅಡ್ಡ ಬಂದ ಪೊಲೀಸ್ ಹೆಡ್ ಕಾನ್ಸ್‌ಟೇಬಲ್‌ರವರ ಮೇಲೆ ಟ್ರ್ಯಾಕ್ಟರ್‌ನ ಹುಕ್ಕು ಕಳಚಿಕೊಂಡು ಟ್ರ್ಯಾಕ್ಟರ್ ಹತ್ತಿ ಸಾವಿಗೀಡಾಗಿರುತ್ತಾರೆ. ಈ ಸಾವು ಸಂಭವಿಸಿದ ಪ್ರಕರಣದಲ್ಲಿ ದಿನಾಂಕ:17.06.2023ರಂದು ಟ್ರ್ಯಾಕ್ಟರ್‌ನ ಮಾಲೀಕರ ತಂದೆಯವರನ್ನು ಪೊಲೀಸರು ಬಂಧಿಸಿ, ಕಾಲಿಗೆ ಶೂಟ್‌ಔಟ್ ಮಾಡಿರುವ ಘಟನೆಯ ಕುರಿತು ಪ್ರಸ್ತಾಪಿಸುವುದು.

## 04. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ:-**<br>**ಎಸ್.ಎಲ್.ಭೋಜೇಗೌಡ,**<br>**ಕೆ.ಎ. ತಿಪ್ಪೇಸ್ವಾಮಿ, ಬಿ.ಎಂ.ಫಾರೂಖ್,**<br>**ಗೋವಿಂದರಾಜು ಮತ್ತು ನಿರಾಣಿ**<br>**ಹಣಮಂತ ರುದ್ರಪ್ಪ ಹಾಗೂ ಇತರರು** | ಮಹದಾಯಿ, ಮೇಕೆದಾಟು ಮತ್ತು ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಗಳಿಗೆ ಅಗತ್ಯವಿರುವ ಅನುದಾನವನ್ನು ಆಯವ್ಯಯದಲ್ಲಿ ಒದಗಿಸದೇ ಇರುವುದರಿಂದ ನೀರಾವರಿ ಯೋಜನೆಗಳ ಅನುಷ್ಠಾನ ನೆನೆಗುದಿಗೆ ಬಿದ್ದಿರುವ ಕಾರಣದಿಂದ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರನ್ನು ನಿಗಧಿತ ಅವಧಿಯಲ್ಲಿ ಬಳಸಿಕೊಳ್ಳಲಾಗದೆ ರಾಜ್ಯದ ಜನತೆಗೆ ಅಪಾರ ನಷ್ಟವುಂಟಾಗಿರುವ ಕುರಿತು. |

## 05. ವಿತ್ತೀಯ ಕಾರ್ಯಕಲಾಪ

2023-24ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**